<u>ಕರ್ನಾಟಕ ಸರ್ಕಾರ</u>

ಸಂಖ್ಯೆ: ಇ-ಕಂಇ 177 ಬಿಎಸ್‌ಸಿ 2025

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಡಾ|| ಬಿ ಆರ್. ಅಂಬೇಡ್ಕರ್ ವೀದಿ,
ಬೆಂಗಳೂರು, ದಿನಾಂಕ:03.10.2025

ಇವರಿಂದ:
ಸಾರ್ವಜನಿಕ ಮಾಹಿತಿ ಅಧಿಕಾರಿ,
ಕಂದಾಯ ಇಲಾಖೆ (ಸೇವೆಗಳು-2),
ಬೆಂಗಳೂರು-560001.

<u>"SPEED POST"</u>

ಇವರಿಗೆ

ಮಾನ್ಯರೇ,

ವಿಷಯ: ಮಾಹಿತಿ ಹಕ್ಕು ಅಧಿನಿಯಮ 2005ರಡಿ ಮಾಹಿತಿ ಕೋರಿರುವ ಬಗ್ಗೆ

ಉಲ್ಲೇಖ: ನಿಮ್ಮ ಅರ್ಜಿ ನೋಂದಣಿ ಸಂಖ್ಯೆ:KREVE/R/2025/80155
ದಿನಾಂಕ:19.09.2025

******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಅರ್ಜಿಯಲ್ಲಿ ಕೆಳಕಂಡ ಮಾಹಿತಿ ಕೋರಲಾಗಿರುತ್ತದೆ.

"Please give information regarding new direct recruitment of Village administrative officer And FDA SDA posts that are approved by Finance department and also give timeline of this recruitment".

ಕಂದಾಯ ಇಲಾಖೆಯಲ್ಲಿ 1500 ಗ್ರಾಮ ಆಡಳಿತ ಅಧಿಕಾರಿಗಳನ್ನು ನೇಮಕ ಮಾಡಲು ಆರ್ಥಿಕ ಇಲಾಖೆಯು ಸಹಮತಿಯನ್ನು ನೀಡಿದ್ದು, ಈ ಪೈಕಿ 1000 ಹುದ್ದೆಗಳನ್ನು 2024-25ನೇ ಸಾಲಿನಲ್ಲಿ ನೇಮಕ ಮಾಡಲಾಗಿರುತ್ತದೆ. ಇನ್ನುಳಿದ 500 ಹುದ್ದೆಗಳ ನೇಮಕಾತಿಗೆ ಸಂಬಂಧಿಸಿದಂತೆ ಪ್ರಸಕ್ತ ಸಾಲಿನಲ್ಲಿ ಕ್ರಮಕೈಗೊಳ್ಳಲಾಗುವುದು. ಮುಂದುವರೆದು ಪ್ರ.ದ.ಸ./ದ್ವಿ.ದ.ಸ., ಹುದ್ದೆಗಳ ನೇಮಕಾತಿಗೆ ಸಂಬಂಧಿಸಿದಂತೆ ಈ ಪ್ರಾಧಿಕಾರದಲ್ಲಿ ಯಾವುದೇ ಪ್ರಸ್ತಾವನೆ ಬಾಕಿ ಇರುವುದಿಲ್ಲವೆಂದು ಈ ಮೂಲಕ ತಿಳಿಸಿದೆ.

ತಮ್ಮ ವಿಶ್ವಾಸಿ,

Digitally signed by
NAGARAJA
Date: 03-10-2025
10:57:32

(ನಾಗರಾಜ)
ಸರ್ಕಾರದ ಅಧೀನ ಕಾರ್ಯದರ್ಶಿ
ಹಾಗೂ ಸಾರ್ವಜನಿಕ ಮಾಹಿತಿ ಅಧಿಕಾರಿ,
ಕಂದಾಯ ಇಲಾಖೆ [ಸೇವೆಗಳು-2].

ಜಿಲ್ಲಾಧಿಕಾರಿ ಹಾಗೂ
ಜಿಲ್ಲಾ ದಂಡಾಧಿಕಾರಿಯವರ ಕಾರ್ಯಾಲಯ
ಉಡುಪಿ ಜಿಲ್ಲೆ, "ರಜತಾದ್ರಿ"
ಮಣಿಪಾಲ, ಉಡುಪಿ – 576104
Email: udupidc@gmail.com

( ಕಂದಾಯ ಇಲಾಖೆ )

Deputy Commissioner &
District Magistrate's Office
Udupi District, " Rajatadri",
Manipal, Udupi - 576104
Office: 0820-2574924, 2574925

ಕ್ರಮಸಂಖ್ಯೆ: ವಿಎಎಸ್ ಸಿಆರ್ 103/2025 ಇ-231285 ದಿನಾಂಕ: 09-10-2025

ಇವರಿಗೆ

1. ಸಹಾಯಕ ಕಮೀಷನರ್ ,ಕುಂದಾಪುರ
2. ತಹಶೀಲ್ದಾರರು -ಉಡುಪಿ ,ಕುಂದಾಪುರ ,ಕಾರ್ಕಳ
   ಬ್ರಹ್ಮಾವರ,ಬೈಂದೂರು ,ಕಾಪು ,ಹೆಬ್ರಿ

ಮಾನ್ಯರೇ,

ವಿಷಯ: ಖಾಲಿ ಇರುವ ಗ್ರಾಮ ಆಡಳಿತ ಅಧಿಕಾರಿ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡುವ ಬಗ್ಗೆ.

ಉಲ್ಲೇಖ: ಸರ್ಕಾರದ ಪತ್ರ ಸಂಖ್ಯೆ: ಕಂಇ 240 ಬಿಎಸ್‌ಸಿ 2022 ದಿನಾಂಕ:26-09-2025

************

ಮೇಲಿನ ವಿಷಯಕ್ಕೆ ಸಂಬಂಧಿಸಿಂತೆ, ರಾಜ್ಯ ಸಿವಿಲ್ ಸೇವೆಗಳಲ್ಲಿನ ಹುದ್ದೆಗಳಿಗೆ ನೇರ ನೇಮಕಾತಿ ಪ್ರಕ್ರಿಯೆಯನ್ನು ತಡೆಹಿಡಿಯಲು ಸೂಚನೆಗಳನ್ನು ನೀಡಿ ಹೊರಡಿಸಲಾಗಿದ್ದ ಅಧಿಸೂಚನೆ/ಸುತ್ತೋಲೆಗಳನ್ನು ಹಿಂಪಡೆಯಲಾಗಿರುತ್ತದೆ. ಆದುದರಿಂದ 2025-26 ನೇ ಸಾಲಿನಲ್ಲಿ 500 ಗ್ರಾಮ ಆಡಳಿತ ಅಧಿಕಾರಿಗಳ ನೇಮಕಾತಿ ಪ್ರಕ್ರಿಯೆಯನ್ನು ಪ್ರಾರಂಭಿಸುವ ಸಲುವಾಗಿ ಜಿಲ್ಲೆಯಲ್ಲಿ ಖಾಲಿ ಇರುವ ಗ್ರಾಮ ಆಡಳಿತ ಅಧಿಕಾರಿ ಹುದ್ದೆಗಳಿಗೆ ಸಂಬಂಧಿಸಿದಂತೆ ಮಾಹಿತಿಯನ್ನು ಒದಗಿಸುವಂತೆ ಉಲ್ಲೇಖದ ಪತ್ರದಲ್ಲಿ ಸೂಚಿಸಲಾಗಿರುತ್ತದೆ.

ಆದ್ದರಿಂದ ಉಲ್ಲೇಖದ ಪತ್ರವನ್ನು ಈ ಕೂಡ ಲಗತ್ತಿಸಿ ಕಳುಹಿಸುತ್ತಾ ಸದರಿ ಪತ್ರದಲ್ಲಿ ತಿಳಿಸಿರುವ ಅಂಶಗಳಿಗೆ ಸಂಬಂಧಿಸಿದಂತೆ ಮಾಹಿತಿಯನ್ನು ಸಿದ್ಧಪಡಿಸಿ ಸಮುಚ್ಚಿತ ಮಾರ್ಗದಲ್ಲಿ ಮೂರು ದಿನಗಳೊಳಗೆ ಈ ಕಾರ್ಯಾಲಯಕ್ಕೆ ಸಲ್ಲಿಸುವಂತೆ ಕೋರಿದೆ.

ತಮ್ಮ ನಂಬುಗೆಯ

09.10.25

ಜಿಲ್ಲಾಧಿಕಾರಿಯವರ ಪರವಾಗಿ
ಉಡುಪಿ ಜಿಲ್ಲೆ,ಉಡುಪಿ

# ಕರ್ನಾಟಕ ಸರ್ಕಾರ

ಸಂಖ್ಯೆ:ಕಂಇ 240 ಬಿಎಸ್‌ಸಿ 2022

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಡಾ|| ಬಿ.ಆರ್. ಅಂಬೇಡ್ಕರ್ ವೀದಿ,
ಬೆಂಗಳೂರು ದಿನಾಂಕ:26.09.2025

**ಇವರಿಂದ:**
ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಕಂದಾಯ ಇಲಾಖೆ,
ಬೆಂಗಳೂರು.

**ಇವರಿಗೆ:**
ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು.

**ಮಾನ್ಯರೆ,**

**ವಿಷಯ:-** ಖಾಲಿ ಇರುವ ಗ್ರಾಮ ಆಡಳಿತ ಅಧಿಕಾರಿ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಡುವ ಕುರಿತು.

**ಉಲ್ಲೇಖ:-** ಸರ್ಕಾರದ ಸುತ್ತೋಲೆ ಸಂಖ್ಯೆ: ಸಿಆಸುಇ 388 ಸೇನೆನಿ 2024, ದಿನಾಂಕ: 06.09.2025.

******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ರಾಜ್ಯ ಸಿವಿಲ್ ಸೇವೆಗಳಲ್ಲಿನ ಹುದ್ದೆಗಳಿಗೆ ನೇರ ನೇಮಕಾತಿ ಪ್ರಕ್ರಿಯೆಯನ್ನು ತಡೆಹಿಡಿಯಲು ಸೂಚನೆಗಳನ್ನು ನೀಡಿ ಹೊರಡಿಸಲಾಗಿದ್ದ ಅಧಿಸೂಚನೆ/ಸುತ್ತೋಲೆಗಳನ್ನು ಉಲ್ಲೇಖಿತ ಸುತ್ತೋಲೆಯಲ್ಲಿ ಹಿಂಪಡೆಯಲಾಗಿರುತ್ತದೆ. ಆದುದರಿಂದ 2025-26 ನೇ ಸಾಲಿನಲ್ಲಿ 500 ಗ್ರಾಮ ಆಡಳಿತ ಅಧಿಕಾರಿಗಳ ನೇಮಕಾತಿ ಪ್ರಕ್ರಿಯೆಯನ್ನು ಪ್ರಾರಂಭಿಸುವ ಸಲುವಾಗಿ ತಮ್ಮ ಜಿಲ್ಲೆಯಲ್ಲಿ ಖಾಲಿ ಇರುವ ಗ್ರಾಮ ಆಡಳಿತ ಅಧಿಕಾರಿ ಹುದ್ದೆಗಳಿಗೆ ಸಂಬಂಧಿಸಿದಂತೆ ಕೆಳಕಂಡ ಅಂಶಗಳಿಗೆ ಮಾಹಿತಿಯನ್ನು ಒಂದು ವಾರದೊಳಗಾಗಿ ಸರ್ಕಾರಕ್ಕೆ ಸಲ್ಲಿಸುವಂತೆ ಕೋರಲು ನಿರ್ದೇಶಿತನಾಗಿದ್ದೇನೆ.

1. ಗ್ರಾಮ ಆಡಳಿತ ಅಧಿಕಾರಿಗಳ ಹುದ್ದೆಗಳ ವಿವರ:

| ಜಿಲ್ಲೆ | ಮಂಜೂರಾಗಿರುವ ಒಟ್ಟು ಹುದ್ದೆ | ಭರ್ತಿಯಾಗಿರುವ ಹುದ್ದೆ | ಖಾಲಿ ಇರುವ ಹುದ್ದೆ |
|---|---|---|---|
| | | | |
| | | | |

2. ಗ್ರಾಮ ಆಡಳಿತ ಅಧಿಕಾರಿಗಳ ಕಛೇರಿಯನ್ನು ಗ್ರಾಮ ಪಂಚಾಯಿತಿ ಕಛೇರಿಗೆ ಸ್ಥಳಾಂತರಿಸಲು ಕೈಗೊಂಡಿರುವ ಕ್ರಮದ ತಾಲ್ಲೂಕುವಾರು ವಿವರ (ಭೌತಿಕವಾಗಿ ಸ್ಥಳ ಲಭ್ಯವಿರುವ ಬಗ್ಗೆ ಮತ್ತು ಅಗತ್ಯವಿರುವ ಪೀಠೋಪಕರಣ/ಮೂಲಭೂತ ಸೌಕರ್ಯಗಳ ಮಾಹಿತಿ ನೀಡುವುದು).
3. ಗ್ರಾಮ ಆಡಳಿತ ಅಧಿಕಾರಿಗಳ ವೃತ್ತಗಳ ಸಂಖ್ಯೆ ಮತ್ತು ಗ್ರಾಮ ಪಂಚಾಯಿತಿಗಳ ಸಂಖ್ಯೆಯನ್ನು ಹೋಬಳಿ/ತಾಲ್ಲೂಕುವಾರು ನೀಡುವುದು.

–

4. ಗ್ರಾಮ ಪಂಚಾಯಿತಿಯ ಭೌಗೋಳಿಕ ವ್ಯಾಪ್ತಿ (geographical jurisdiction) ಮತ್ತು ಗ್ರಾಮ ಆಡಳಿತ ಅಧಿಕಾರಿಗಳ ಭೌಗೋಳಿಕ ವ್ಯಾಪ್ತಿಯು ಒಂದೇ ಅಗಿರುವ ವೃತ್ತಗಳ ತಾಲ್ಲೂಕುವಾರು ಸಂಖ್ಯೆ

ತಮ್ಮ ನಂಬುಗೆಯ,

Digitally signed by
NAGARAJA
Date: 26-09-2025
13:18:34

(ನಾಗರಾಜ)
ಸರ್ಕಾರದ ಅಧೀನ ಕಾರ್ಯದರ್ಶಿ,
ಕಂದಾಯ ಇಲಾಖೆ (ಸೇವೆಗಳು-2)